ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಚಿವ ಸಂಪುಟ

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ

ದಿನಾಂಕ : DATE : 26/05/2019

# ಮೇ 30ಕ್ಕೆ ನರೇಂದ್ರ ಮೋದಿ ಪ್ರಮಾಣ ವಚನ ಸಾಧ್ಯತೆ

**ದೆಹಲಿ:** 17ನೇ ಲೋಕಸಭೆ ಚುನಾವಣೆಯಲ್ಲಿ ನಿರೀಕ್ಷೆಗೂ ಮೀರಿ ಬಿಜೆಪಿಗೆ ಅದ್ಭುತ ವಿಜಯ ತಂದುಕೊಟ್ಟ ನರೇಂದ್ರ ಮೋದಿ ಅವರು 30 ರಂದು ಮತ್ತೆ ಎರಡನೇ ಅವಧಿಗೆ ಪ್ರಧಾನಿ ಆಗಿ ಅಧಿಕಾರ ವಹಿಸಿಕೊಳ್ಳುವ ಸಾಧ್ಯತೆ ಇದೆ.

ಪ್ರಮಾಣವಚನದ ದಿನಾಂಕ ಅಧಿಕೃತವಾಗಿ ನಿಗದಿಯಾಗದೇ ಇದ್ದರೂ ದೆಹಲಿ ಮತ್ತು ಬಿಜೆಪಿ ಮೂಲಗಳ ಪ್ರಕಾರ ಇದೇ 30 ರಂದು ಪ್ರಮಾಣವಚನ ಸ್ವೀಕರಿಸಲಿದ್ದಾರೆ ಎಂದು ಹೇಳಲಾಗುತ್ತಿದೆ.

ಶುಕ್ರವಾರ ಅನೌಪಚಾರಿಕ ಸಚಿವ ಸಂಪುಟ ಸಭೆ ನಡೆಸಿದ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಮಂತ್ರಿಮಂಡಲದ ಸದಸ್ಯರೊಂದಿಗೆ ರಾಷ್ಟ್ರಪತಿ ಅವರಿಗೆ ರಾಜೀನಾಮೆ ಸಲ್ಲಿಸಿದರು. ಅವರ ರಾಜೀನಾಮೆಯನ್ನು ಅಂಗೀಕರಿಸಿರುವ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್ ಬದಲಿ ವ್ಯವಸ್ಥೆಯಾಗುವವರೆಗೆ ಮುಂದುವರಿಯುವಂತೆ ಸೂಚನೆ ನೀಡಿದ್ದಾರೆ.

542 ಲೋಕಸಭಾ ಸ್ಥಾನಗಳ ಪೈಕಿ ಈ ಬಾರಿ ಬಿಜೆಪಿ 300 ಕ್ಕೂ ಹೆಚ್ಚು ಸ್ಥಾನಗಳಲ್ಲಿ ಜಯಭೇರಿ ಬಾರಿಸಿ 2014ರ ದಾಖಲೆಯನ್ನು ದಾಟಿ ಮುಂದೆ ಹೋಗಿದೆ. ಅವರು ಇದೇ 28 ರಂದು ತಮ್ಮನ್ನು ಗೆಲ್ಲಿಸಿದ ವಾರಾಣಸಿ ಕ್ಷೇತ್ರಕ್ಕೆ ತೆರಳಿ ಅಲ್ಲಿನ ಮತದಾರರಿಗೆ ಕೃತಜ್ಞತೆ ಸಲ್ಲಿಸಲಿದ್ದಾರೆ.

ಅದಕ್ಕೂ ಮುನ್ನ ತವರು ರಾಜ್ಯ ಗುಜರಾತ್‌ಗೆ ತೆರಳಿ ಅವರ ತಾಯಿಯ ಆಶೀರ್ವಾದ ಪಡೆಯಲಿದ್ದಾರೆ ಎಂದು ಬಿಜೆಪಿ ಮೂಲಗಳು ತಿಳಿಸಿವೆ.

## ತಾಯಿಯ ಆಶೀರ್ವಾದ ಪಡೆಯಲಿರುವ ಮೋದಿ

ಇಂದು ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ತಾಯಿಯ ಆಶೀರ್ವಾದ ಪಡೆಯಲು ಗುಜರಾತ್‌ಗೆ ಆಗಮಿಸಲಿದ್ದಾರೆ. ನಂತರ ಸೋಮವಾರ ಸ್ವ ಕ್ಷೇತ್ರ ವಾರಾಣಸಿಗೆ ಭೇಟಿ ನೀಡಲಿದ್ದಾರೆ ಎಂದು ಟ್ವೀಟ್ ಮಾಡಿದ್ದಾರೆ. ತಾಯಿಯ ಆಶೀರ್ವಾದ ಪಡೆಯಲು ಇಂದು ಗುಜರಾತ್‌ಗೆ ಆಗಮಿಸಲಿದ್ದೇನೆ, ನಮ್ಮ ಮೇಲೆ ವಿಶ್ವಾಸವಿಟ್ಟು ಮತ್ತೊಮ್ಮೆ ಗೆಲ್ಲಿಸಿದ ಕ್ಷೇತ್ರದ ಜನರಿಗೆ ಕೃತಜ್ಞತೆ ಸಲ್ಲಿಸಲು ನಾಳೆ ಕಾಶಿಗೆ ಹೋಗುತ್ತಿದ್ದೇನೆ ಎಂದು ಪ್ರಧಾನಿ ಟ್ವೀಟ್ ಮಾಡಿದ್ದಾರೆ.